All India Radio: Bangalore
Regional Bulletin In Kannada
12.01.2025 / 2.30 p.m.
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಉತ್ಸವಕ್ಕೆ ಬೈಲಹೊಂಗಲದಲ್ಲಿ ಚಾಲನೆ
- ಹಳೆ ಪಿಂಚಣಿ ಪದ್ಧತಿ ಮರುಜಾರಿಗಾಗಿ ಸರ್ಕಾರದ ಮೇಲೆ ಒತ್ತಡ ಹೇರಲು ರಾಜ್ಯ ಸರ್ಕಾರಿ ನೌಕರರ ಸಂಘದ ಕಾರ್ಯಕಾರಿ ಸಮಿತಿ ನಿರ್ಣಯ
- ಇಂದು ರಾಷ್ಟ್ರೀಯ ಯುವ ದಿನ; ಕರ್ನಾಟಕ ಸೇರಿ ದೇಶಾದ್ಯಂತ ಸ್ವಾಮಿ ವಿವೇಕಾನಂದರ ಜನ್ಮ ದಿನ ಆಚರಣೆ
- ಐತಿಹಾಸಿಕ ಶಬರಿಕೊಳ್ಳ ಅಭಿವೃದ್ಧಿಗೆ ಪ್ರಧಾನಿಗೆ ಸಂಸದ ಜಗದೀಶ್ ಶೆಟ್ಟರ್ ಮನವಿ
- ಸ್ಪೆಡೆಕ್ಸ್ ಪ್ರಯೋಗ; ಉಪಗ್ರಹಗಳನ್ನು ೩ ಮೀಟರ್ ಹತ್ತಿರಕ್ಕೆ ತರುವಲ್ಲಿ ಇಸ್ರೋ ಯಶಸ್ವಿ

*******************

ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಉತ್ಸವ-೨೦೨೫ಕ್ಕೆ ಇಂದು ಮುಂಜಾನೆ ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲೂಕಿನ ರಾಯಣ್ಣನ ಜನ್ಮಸ್ಥಳ ಸಂಗೊಳ್ಳಿಯಲ್ಲಿ ಅದ್ದೂರಿ ಚಾಲನೆ ನೀಡಲಾಯಿತು.

ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ಆಯೋಜಿಸಲಾಗಿರುವ ಉತ್ಸವವು ಪ್ರತಿವರ್ಷದಂತೆ ಸಾಂಪ್ರದಾಯಿಕವಾಗಿ ಆರಂಭಗೊಂಡಿದೆ. ಸಂಗೊಳ್ಳಿಯ ಶ್ರೀ ಸಿದ್ದಲಿಂಗೇಶ್ವರ ಸಂಸ್ಥಾನ ಹಿರೇಮಠದ ಗುರುಲಿಂಗ ಶಿವಾಚಾರ್ಯ ಮಹಾಸ್ವಾಮಿಗಳ ಸಾನಿಧ್ಯದಲ್ಲಿ ಸಂಗೊಳ್ಳಿ ರಾಯಣ್ಣ ಪ್ರತಿಮೆಗೆ ಪ್ರಾತಃಕಾಲದ ಪೂಜೆ ಸಲ್ಲಿಸಲಾಯಿತು.

ಬೈಲಹೊಂಗಲ ಶಾಸಕ ಮಹಾಂತೇಶ ಕೌಜಲಗಿ ಜ್ಯೋತಿಯನ್ನು ಸ್ವಾಗತಿಸಿದರು. ಉಪ ವಿಭಾಗಾಧಿಕಾರಿ ಪ್ರಭಾವತಿ ಫಕ್ಕೀರಪುರ, ಸಂಗೊಳ್ಳಿ ರಾಯಣ್ಣ ಸ್ಮಾರಕ ಭವನದ ಆವರಣದಲ್ಲಿ ಕಿತ್ತೂರು ಸಂಸ್ಥಾನದ ಧ್ವಜಾರೋಹಣ ನೆರವೇರಿಸಿದರು. ಬಳಿಕ ಕಿತ್ತೂರು ಶಾಸಕ ಬಾಬಾಸಾಹೇಬ್ ಪಾಟೀಲ, ಜಾನಪದ ಕಲಾವಾಹಿನಿಗೆ ಚಾಲನೆ ನೀಡಿದರು.

ಪೂರ್ಣ ಕುಂಭ ಹೊತ್ತ ಮಹಿಳೆಯರು, ಪೂಜಾ ಕುಣಿತ, ನಂದಿಕೋಲು, ವೀರಗಾಸೆ, ಡೊಳ್ಳು, ಬೊಂಬೆ ಕುಣಿತ ಸೇರಿದಂತೆ ವಿವಿಧ ಕಲಾ ತಂಡಗಳು ಉತ್ಸವಕ್ಕೆ ಮೆರುಗು ತಂದಿತು. ಸಂಗೊಳ್ಳಿ ರಾಯಣ್ಣ ಸ್ಮಾರಕದ ಬಳಿಯಿಂದ ಆರಂಭಗೊಂಡ ಕಲಾವಾಹಿನಿಯು ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿತು.

ಇಂದು ಸಂಜೆ ೮ ಗಂಟೆಗೆ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಉತ್ಸವದ ಅಧಿಕೃತ ಉದ್ಘಾಟನೆ ನೆರವೇರಿಸಲಿದ್ದಾರೆ. ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಸೇರಿದಂತೆ ಅನೇಕ ಗಣ್ಯರು ಪಾಲ್ಗೊಳ್ಳಲಿದ್ದಾರೆ.

ನಾಳೆ ಸಂಜೆ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ. ವೀರರ ಸ್ಮರಣಾರ್ಥ ದೀಪೋತ್ಸವ, ರಾಯಣ್ಣನ ಕುರಿತಾದ ವಿಚಾರ ಸಂಕಿರಣ, ರಾಷ್ಟ್ರಮಟ್ಟದ ಕುಸ್ತಿ ಪಂದ್ಯಾವಳಿ ಸೇರಿದಂತೆ ಇತರೆ ಸ್ಪರ್ಧೆಗಳು ನಡೆಯಲಿವೆ.

*******************

ಹಳೆ ಪಿಂಚಣಿ ಪದ್ಧತಿ ಮರು ಜಾರಿಗಾಗಿ ಸರ್ಕಾರದ ಮೇಲೆ ಒತ್ತಡ ಹೇರಲು ವಿವಿಧ ಹಂತಗಳಲ್ಲಿ ಹೋರಾಟ ಸೇರಿದಂತೆ ಇನ್ನಿತರೆ ನಿರ್ಣಯಗಳಿಗೆ ಬೆಂಬಲ ಸೂಚಿಸಲು ದಾವಣಗೆರೆಯಲ್ಲಿ ನಡೆದ ರಾಜ್ಯ ಸರ್ಕಾರಿ ನೌಕರರ ಸಂಘದ ಕಾರ್ಯಕಾರಿ ಸಮಿತಿ ಸಭೆ ನಿರ್ಧರಿಸಲಾಗಿದೆ ಎಂದು ಸಂಘದ ರಾಜ್ಯಾಧ್ಯಕ್ಷ ಸಿ.ಎಸ್.ಷಡಕ್ಷರಿ ತಿಳಿಸಿದ್ದಾರೆ.

ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಗದು ರಹಿತ ಚಿಕಿತ್ಸೆ ಯೋಜನೆಯ ತ್ವರಿತ ಜಾರಿಗೆ ಒತ್ತಾಯಿಸುವುದು, ೨೦೨೬ಕ್ಕೆ ಕೇಂದ್ರ ಸರ್ಕಾರದ ಮಾದರಿ ವೇತನಕ್ಕಾಗಿ ಹೋರಾಟ ರೂಪಿಸುವುದು ಮುಖ್ಯ ಉದ್ದೇಶವಾಗಿದೆ ಎಂದರು.

ಪ್ರಾಥಮಿಕ ಶಾಲಾ ಶಿಕ್ಷಕರ ಸಿ ಆಂಡ್ ಆರ್ ನಿಯಮಕ್ಕೆ ತಿದ್ದುಪಡಿ ತರುವಂತೆ ಆಗ್ರಹಿಸಿ, ನಡೆಸಲಾಗುವ ಹೋರಾಟವನ್ನು ಬೆಂಬಲಿಸುವುದು, ವೈದ್ಯಕೀಯ ವೆಚ್ಚ ಮರುಪಾವತಿ ಬಿಲ್‌ಗಳಿಗೆ ಶೀಘ್ರವೇ ಹಣ ಬಿಡುಗಡೆ ಮಾಡಿಸುವ ನಿರ್ಣಯಗಳನ್ನು ಕೈಗೊಳ್ಳಲಾಯಿತು ಎಂದು ಸಿ.ಎಸ್.ಷಡಕ್ಷರಿ ತಿಳಿಸಿದರು.

*******************

ಇಂದು ಕರ್ನಾಟಕ ಸೇರಿದಂತೆ ದೇಶಾದ್ಯಂತ ರಾಷ್ಟ್ರೀಯ ಯುವ ದಿನೋತ್ಸವನ್ನು ಆಚರಿಸಲಾಗುತ್ತಿದೆ. ದೇಶ ಕಂಡ ಶ್ರೇಷ್ಠ ಆಧ್ಯಾತ್ಮಿಕ ನಾಯಕ, ಚಿಂತಕ, ತತ್ವಜ್ಞಾನಿ ಸ್ವಾಮಿ ವಿವೇಕಾನಂದರ ಜನ್ಮದಿನಾಚರಣೆ ಸ್ಮರಣಾರ್ಥ ಈ ದಿನವನ್ನು ಯುವ ದಿನವನ್ನಾಗಿ ಆಚರಿಸಲಾಗುತ್ತಿದೆ.

ಸ್ವಾಮಿ ವಿವೇಕಾನಂದರ ಜನ್ಮವರ್ಷಾಚರಣೆ ಹಿನ್ನೆಲೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಹಾಗೂ ಪ್ರಧಾನಿ ನರೇಂದ್ರ ಮೋದಿ ಇಂದು ವಿವೇಕಾನಂದರಿಗೆ ಗೌರವ ನಮನ ಸಲ್ಲಿಸಿದ್ದಾರೆ.

ಸಾಮಾಜಿಕ ಮಾಧ್ಯಮ ಸಂದೇಶದಲ್ಲಿ ರಾಷ್ಟ್ರಪತಿ ಅವರು, ಸ್ವಾಮಿ ವಿವೇಕಾನಂದರು ದೇಶದ ಶ್ರೇಷ್ಠ ಆಧ್ಯಾತ್ಮಿಕ ಸಂದೇಶವನ್ನು ಪಾಶ್ಚಾತ್ಯ ಜಗತ್ತಿಗೆ ಕೊಂಡೊಯ್ದರು. ದೇಶದ ಯುವಕರನ್ನು ತಮ್ಮ ಸಾಮರ್ಥ್ಯವನ್ನು ಅರಿತು, ರಾಷ್ಟ್ರ ನಿರ್ಮಾಣದೆಡೆಗೆ ಕಾರ್ಯೋನ್ಮುಖರಾಗಿ, ಮನುಕುಲದ ಸೇವೆ ಮಾಡಲು ಪ್ರೇರೇಪಿಸಿದರು ಎಂದು ತಿಳಿಸಿದ್ದಾರೆ.

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್, ಭಾರತೀಯ ಆದ್ಯಾತ್ಮಿಕ ಜ್ಞಾನದ ಪರಂಪರೆಯ ಸಂಕೇತವಾಗಿದ್ದ ಸ್ವಾಮಿ ವಿವೇಕಾನಂದರು, ನೀಡಿದ ಏಳಿ ಎದ್ದೇಳಿ ಗುರಿ ಮುಟ್ಟುವ ತನಕ ನಿಲ್ಲದಿರಿ ಎನ್ನುವ ಸಂದೇಶ ಇಂದು ಸ್ವಯಂ ಸಬಲೀಕರಣದ ಮಂತ್ರವಾಗಿದೆ ಎಂದಿದ್ದಾರೆ.

ಯುವಕರಿಗೆ ಸ್ಫೂರ್ತಿಯಾಗಿರುವ ಸ್ವಾಮಿ ವಿವೇಕಾನಂದರು, ಯುವ ಮನಸ್ಸುಗಳಲ್ಲಿ ಉತ್ಸಾಹ ಮತ್ತು ಧ್ಯೇಯವನ್ನು ಬೆಳೆಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ. ಬಲಿಷ್ಠ ಹಾಗೂ ಅಭಿವೃದ್ಧಿ ಹೊಂದಿದ ಭಾರತದ ಅವರ ದೃಷ್ಟಿಕೋನವನ್ನು ಸಹಕಾರಗೊಳಿಸಲು ಕೇಂದ್ರ ಸರ್ಕಾರ ಬದ್ಧವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದ್ದಾರೆ.

*******************

ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿಯಾಗಿ, ಬೆಳಗಾವಿ ಜಿಲ್ಲೆ ರಾಮದುರ್ಗದಲ್ಲಿರುವ ಐತಿಹಾಸಿಕ ಶಬರಿ ಕೊಳ್ಳ ಅಭಿವೃದ್ಧಿಪಡಿಸುವಂತೆ ಮನವಿ ಮಾಡಲಾಗಿದೆ ಎಂದು ಬೆಳಗಾವಿ ಸಂಸದ ಜಗದೀಶ ಶೆಟ್ಟರ್ ತಿಳಿಸಿದ್ದಾರೆ.

ಬೆಳಗಾವಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಂಗಳೂರು-ಧಾರವಾಡದ ಮಧ್ಯ ಸಂಚರಿಸುತ್ತಿರುವ 'ವಂದೇ ಭಾರತ್' ಎಕ್ಸ್‌ಪ್ರೆಸ್ ರೈಲು ಸಂಚಾರವನ್ನು ಬೆಳಗಾವಿಯವರೆಗೆ ವಿಸ್ತರಿಸುವಂತೆ ಕೋರಲಾಗಿದೆ ಎಂದರು.

ಧ್ವನಿ: ಜಗದೀಶ್ ಶೆಟ್ಟರ್

ವಿಮಾನಯಾನ ಸೇವೆಗೆ ಸಂಬಂಧಿಸಿದಂತೆ "ಉಡಾನ್ ೩.೦" ಯೋಜನೆಯ ಅವಧಿಯನ್ನು ಇನ್ನೂ ಹೆಚ್ಚಿಸಿದಲ್ಲಿ ಪ್ರಯಾಣಿಕರಿಗೆ ಅನುಕೂಲವಾಗಲಿದೆ. ಅಲ್ಲದೇ ಬೆಳಗಾವಿ ನಗರ ಸೇರಿದಂತೆ ಇತರೆ ನಗರಗಳಲ್ಲಿ ವಿಮಾನಯಾನ ಸೇವೆಯ ಬೆಳವಣಿಗೆಗೆ ಪೂರಕವಾಗಲಿದೆ ಎಂದು ಪ್ರಧಾನಿಯವರಿಗೆ ಮನವಿ ಮಾಡಲಾಗಿದೆ ಎಂದು ಸಂಸದ ಜಗದೀಶ್ ಶೆಟ್ಟರ್ ತಿಳಿಸಿದ್ದಾರೆ.

*******************

ಸ್ಪೆಡೆಕ್ಸ್ ಕಾರ್ಯಕ್ರಮದ ಅಡಿಯಲ್ಲಿ ಡಾಕಿಂಗ್‌ಗೂ ಮುನ್ನ ತನ್ನ ಎರಡು ಉಪಗ್ರಹಗಳನ್ನು ಸ್ಥಿರಗೊಳಿಸುವಲ್ಲಿ ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ- ಇಸ್ರೋ ಗಮನಾರ್ಹ ಪ್ರಗತಿ ಸಾಧಿಸಿದೆ.

ಚೇಸರ್-ಎಸ್‌ಡಿಎಕ್ಸ್-೧ ಮತ್ತು ಟಾರ್ಗೆಟ್-ಎಕ್ಸ್‌ಡಿಎಕ್ಸ್-೨ ಉಪಗ್ರಹಗಳನ್ನು ೩ ಮೀಟರ್ ಹತ್ತಿರಕ್ಕೆ ತರುವಲ್ಲಿ ಇಸ್ರೋ ಯಶಸ್ವಿಯಾಗಿದ್ದು, ಬಳಿಕ ಅವುಗಳನ್ನು ಸುರಕ್ಷಿತ ದೂರಕ್ಕೆ ಹಿಂತಿರುಗಿಸಲಾಗಿದೆ.

ಉಪಗ್ರಹಗಳಲ್ಲಿನ ಕ್ಯಾಮೆರಾಗಳಿಂದ ತೆಗೆದ ಛಾಯಾಚಿತ್ರಗಳನ್ನು ಇಸ್ರೋ ಹಂಚಿಕೊಂಡಿದೆ. ಇಲ್ಲಿಯವರೆಗೆ ದೊರೆತಿರುವಂತಹ ದತ್ತಾಂಶದ ವಿಶ್ಲೇಷಣೆಯ ಬಳಿಕವೇ ಡಾಕಿಂಗ್ ಪ್ರಕ್ರಿಯೆಯನ್ನು ಮಾಡಲಾಗುತ್ತದೆ ಎಂದು ಭಾರತೀಯ ಬಾಹ್ಯಾಕಾಶ ಸಂಸ್ಥೆ- ಇಸ್ರೋ ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದೆ.

*******************

ಜಾತಿ ಗಣತಿ ವಿಚಾರವಾಗಿ ಈಗಲೇ ಸಭೆ ನಡೆಸಿ, ಗೊಂದಲ ಸೃಷ್ಟಿಸುವುದು ಬೇಡ. ಈ ವಿಚಾರವಾಗಿ ಆದಿಚುಂಚನಗಿರಿ ಮಠದ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿಗಳೊಂದಿಗೆ ಚರ್ಚಿಸಲಾಗುವುದು. ಸಭೆಯನ್ನು ಮುಂದೂಡುವಂತೆ ಒಕ್ಕಲಿಗರ ಸಂಘದ ಪದಾಧಿಕಾರಿಗಳಿಗೆ ಮನವಿ ಮಾಡಲಾಗಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಒಕ್ಕಲಿಗರ ಸಂಘದ ಪದಾಧಿಕಾರಿಗಳ ಜೊತೆ ಯಾವುದೇ ಸಭೆ ನಡೆಸಿಲ್ಲ. ಅದರ ಅವಶ್ಯಕತೆ ಇಲ್ಲ. ಇಂದು ಜಾತಿ ಗಣತಿ ವಿಚಾರವಾಗಿ ಪ್ರತ್ಯೇಕವಾಗಿ ಸಭೆ ನಡೆಸಬೇಕು ಎಂದು ಅವರು ತೀರ್ಮಾನ ಮಾಡಿದ್ದರು. ಆ ಸಭೆಯಲ್ಲಿ ಭಾಗವಹಿಸುವುದಿಲ್ಲ ಎಂದು ತಿಳಿಸಿದ್ದೇನೆ ಎಂದು ಸ್ಪಷ್ಟಪಡಿಸಿದರು.

*******************

ಸಂವಿಧಾನ ಶಿಲ್ಪಿ ಡಾ. ಬಿ.ಆರ್.ಅಂಬೇಡ್ಕರ್ ಅವರ ಸಂವಿಧಾನದ ಆಶಯದಂತೆ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಕಾರ್ಯ ನಿರ್ವಹಿಸುತ್ತಿದೆ ಎಂದು ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ಹೇಳಿದ್ದಾರೆ.

ಮಂಡ್ಯ ಜಿಲ್ಲೆಯ ಮಳವಳ್ಳಿ ತಾಲೂಕಿನ ಕಲ್ಕುಣಿ ಗ್ರಾಮದಲ್ಲಿ ನಿರ್ಮಿಸಲಾಗಿರುವ 'ಬೌದ್ಧ ಅಂಬೇಡ್ಕರ್ ಮಹಾದ್ವಾರ'ವನ್ನು ಉದ್ಘಾಟಿಸಿ ಮಾತನಾಡಿದ ಅವರು, ಅತ್ಯಂತ ಅರ್ಥಪೂರ್ಣವಾಗಿ ನಿರ್ಮಿಸಲಾಗಿರುವ ಈ ಮಹಾದ್ವಾರ ಸಮ ಸಮಾಜದ ಸಂಕೇತವಾಗಿದೆ ಎಂದರು.

ಐತಿಹಾಸಿಕವಾಗಿ ಅಂಬೇಡ್ಕರ್ ಅವರಿಗೆ ಬಹಳ ಅಪಚಾರವಾಗಿತ್ತು. ಅದನ್ನು ಸರಿಪಡಿಸಿ ಮನುಕುಲ ಇರುವವರೆಗೂ ಬಾಬಾ ಸಾಹೇಬ್ ಅವರನ್ನು ಸ್ಮರಿಸಿಕೊಳ್ಳುವ ಕೆಲಸವನ್ನು ಕೇಂದ್ರ ಸರಕಾರ ಮಾಡುತ್ತಿದೆ ಎಂದು ಹೇಳಿದರು.

ಧ್ವನಿ: ಸಚಿವ ಹೆಚ್.ಡಿ.ಕುಮಾರಸ್ವಾಮಿ

*******************

ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರ ನೇತೃತ್ವದಲ್ಲಿ ಇಂದು ಜೆಡಿಎಸ್ ಪಕ್ಷದ ಶಾಸಕರು, ಮುಖಂಡರ ಸಭೆ ಚೆನ್ನಪಟ್ಟಣದಲ್ಲಿ ನಡೆಯಲಿದೆ. ಪಂಚಾಯತ್ ಚುನಾವಣೆ, ಶಾಸಕರ ಕುಂದು-ಕೊರತೆ ಹಾಗೂ ಪಕ್ಷದ ರಾಜ್ಯಾಧ್ಯಕ್ಷ ಸ್ಥಾನದ ಜವಾಬ್ದಾರಿ ನೀಡುವ ಕುರಿತು ಚರ್ಚೆ ನಡೆಯಲಿದೆ ಎನ್ನಲಾಗಿದೆ.

ಈ ನಡುವೆ, ತಾವು ಸಭೆಗೆ ಹಾಜರಾಗುವುದಿಲ್ಲ ಎಂದು ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷ ಮತ್ತು ಚಾಮುಂಡೇಶ್ವರಿ ಶಾಸಕ ಜಿ.ಟಿ.ದೇವೇಗೌಡ ತಿಳಿಸಿದ್ದಾರೆ.

*******************

ಗದಗ ಬೆಟಗೇರಿ ಅವಳಿ ನಗರಕ್ಕೆ ನೀರೊದಗಿಸಲು ಪ್ರಮುಖ ನೀರಿನ ಮೂಲವಾದ ತುಂಗಭದ್ರಾ ನದಿಯ ನೀರೆತ್ತುವ ಸಿಂಗಟಾಲೂರ ಬ್ಯಾರೇಜ್ ಅನ್ನು ಗದಗ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಪರಿಶೀಲಿಸಿದರು.

ಗದಗ ಬೆಟಗೇರಿ ಅವಳಿ ನಗರಗಳಿಗೆ ನೀರು ಸರಬರಾಜು ಮಾಡುವಲ್ಲಿ ಇರುವ ತೊಂದರೆಗಳ ನಿವಾರಣೆಗೆ ಆದ್ಯತೆ ನೀಡುವ ಮೂಲಕ ಅಧಿಕಾರಿಗಳು ಕಾರ್ಯ ನಿರ್ವಹಿಸಬೇಕು. ನಗರ ಸಭೆಯ ಅಧಿಕಾರಿಗಳು ಹಾಗೂ ನೀರು ಸರಬರಾಜುಗೆ ಸಂಬಂಧಿಸಿದ ಇಲಾಖೆ ಅಧಿಕಾರಿಗಳು ಸೂಕ್ತವಾಗಿ ಕಾರ್ಯನಿರ್ವಹಿಸುವ ಮೂಲಕ, ಅವಳಿ ನಗರದ ಜನತೆಗೆ ನಿಯಮಿತವಾಗಿ ನೀರು ಒದಗಿಸಲು ಶ್ರಮಿಸುವಂತೆ ಜಿಲ್ಲಾಧಿಕಾರಿ ಸೂಚಿಸಿದರು.

*******************

ಸಂಚಾರ ನಿಯಮಗಳ ಉಲ್ಲಂಘನೆಯೇ ರಸ್ತೆ ಅಪಘಾತಗಳ ಹೆಚ್ಚಳಕ್ಕೆ ಮುಖ್ಯ ಕಾರಣ ಎಂದು ಚಿತ್ರನಟ ಮಂಡ್ಯ ರಮೇಶ್ ಹೇಳಿದ್ದಾರೆ.

ದಾವಣಗೆರೆ ಜಿಲ್ಲಾ ಪೊಲೀಸ್ ಇಲಾಖೆಯಿಂದ ಹಮ್ಮಿಕೊಂಡಿದ್ದ ರಸ್ತೆ ಸುರಕ್ಷಾ ಮಾಸಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ಯುವ ಜನರು ವಿದ್ಯಾಭ್ಯಾಸದ ಜೊತೆಗೆ ಸಂಚಾರ ನಿಯಮಗಳ ಬಗ್ಗೆ ತಿಳಿದುಕೊಂಡು, ಇತರರಿಗೂ ಜಾಗೃತಿ ಮೂಡಿಸುವ ಕೆಲಸ ಮಾಡಬೇಕು ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ಮಾತನಾಡಿ, ಸಂಚಾರ ನಿಯಮ ಪಾಲಿಸಿ, ರಸ್ತೆ ಅಪಘಾತ ತಪ್ಪಿಸಿ ಎಂಬ ಘೋಷವಾಕ್ಯದೊಂದಿಗೆ ಇದೇ ೩೧ರ ವರೆಗೆ ರಾಷ್ಟ್ರೀಯ ರಸ್ತೆ ಸುರಕ್ಷಾ ಮಾಸಾಚರಣೆ ನಡೆಸಲಾಗುತ್ತಿದೆ ಎಂದು ತಿಳಿಸಿದರು.

*******************

ಸಂಕ್ಷಿಪ್ತ ಸುದ್ದಿಗಳು

- ರಾಮನಗರ ಜಿಲ್ಲೆಯ ನ್ಯಾಯಾಲಯದಲ್ಲಿ ಬಾಕಿ ಇರುವ ಹಾಗೂ ರಾಜಿ ಆಗಬಹುದಾದ ಪ್ರಕರಣಗಳನ್ನು ಮಾರ್ಚ್ ೮ರಂದು ನಡೆಯಲಿರುವ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಇತ್ಯರ್ಥಗೊಳಿಸಿಕೊಳ್ಳುವಂತೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಅಧ್ಯಕ್ಷರಾದ ನ್ಯಾ. ಬಿ.ವಿ.ರೇಣುಕಾ ಕರೆ ನೀಡಿದ್ದಾರೆ.
- ಉಡುಪಿ ಲೋಕಾಯುಕ್ತ ವಿಭಾಗದ ವತಿಯಿಂದ ಜಿಲ್ಲಾ ಲೋಕಾಯುಕ್ತ ವಿಭಾಗದ ಪೊಲೀಸ್ ಉಪಾಧೀಕ್ಷಕರು ಹಾಗೂ ನಿರೀಕ್ಷಕರು ಮತ್ತು ಮಂಗಳೂರು ವಿಭಾಗದ ಪೊಲೀಸ್ ಅಧೀಕ್ಷಕರು ಇದೇ ೧೫ ರಂದು ಬೆಳಗ್ಗೆ ೧೧ ರಿಂದ ಮಧ್ಯಾಹ್ನ ೧.೩೦ ಗಂಟೆಯವರೆಗೆ ಹೆಬ್ರಿ ತಾಲೂಕು

ಕಚೇರಿಯಲ್ಲಿ ಸಾರ್ವಜನಿಕ ಅಹವಾಲು ಮತ್ತು ಲೋಕಾಯುಕ್ತ ಜನಸಂಪರ್ಕ ಸಭೆ ನಡೆಸಲಿದ್ದಾರೆ.

- ಇದೇ ಜನವರಿ ೨೬ ರಂದು ನಡೆಯುವ ಭಾರತ ಗಣರಾಜ್ಯೋತ್ಸವ ಕಾರ್ಯಕ್ರಮವನ್ನು ಅರ್ಥಪೂರ್ಣ ಹಾಗೂ ವ್ಯವಸ್ಥಿತವಾಗಿ ಆಯೋಜಿಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಉಡುಪಿ ಜಿಲ್ಲಾಧಿಕಾರಿ ಡಾ. ಕೆ ವಿದ್ಯಾಕುಮಾರಿ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

********** ಮುಕ್ತಾಯ *********